ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
ಆರನೇ ಅಧಿವೇಶನ
(ಮುಂದುವರೆದ ಉಪವೇಶನ)

ಕಾರ್ಯಕಲಾಪಗಳ ಪಟ್ಟಿ

ಬುಧವಾರ, ದಿನಾಂಕ 18ನೇ ಮಾರ್ಚ್, 2015
(ಸಮಯ: ಬೆಳಗ್ಗೆ 11.00 ಗಂಟೆಗೆ)

-----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹನ್ನೆರಡನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹನ್ನೆರಡನೇ ಪಟ್ಟಿ

2. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಶ್ರೀ ಸಿದ್ಧರಾಮಯ್ಯ (ಮುಖ್ಯಮಂತ್ರಿಗಳು) ಅವರು:-

ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ 31ನೇ ಮಾರ್ಚ್ 2014ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ ರಾಜ್ಯ ಸರ್ಕಾರದ ಹಣಕಾಸಿನ ವ್ಯವಹಾರಗಳು ಹಾಗೂ ಸಾಮಾನ್ಯ ಮತ್ತು ಸಾಮಾಜಿಕ ವಲಯ ಮೇಲಿನ ವರದಿ (ಸಂಖ್ಯೆ-10)ಯನ್ನು ಸಭೆಯ ಮುಂದಿಡುವುದು.

3. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

ಶ್ರೀಯುತರುಗಳಾದ ಜಗದೀಶ್ ಶೆಟ್ಟರ್, ಗೋವಿಂದ ಎಂ.ಕಾರಜೋಳ, ಬಸವರಾಜ ಬೊಮ್ಮಾಯಿ, ಸಿ.ಟಿ. ರವಿ ಮತ್ತು ವಿ.ಸುನಿಲ್ ಕುಮಾರ್ ಅವರು ರಾಜ್ಯಾದ್ಯಂತ ಅಂತರ್ಜಲ ಮಟ್ಟ ಕುಸಿಯುತ್ತಿರುವ ಹಿನ್ನೆಲೆಯಲ್ಲಿ ರಾಜ್ಯದ ಕೆರೆಗಳು ಒಣಗಿ ಜನ-ಜಾನುವಾರುಗಳಿಗೆ ಕುಡಿಯುವ ನೀರಿಗೆ ವಿಪರೀತ ತೊಂದರೆಯಾಗುತ್ತಿರುವ ಬಗ್ಗೆ ನಡೆದ ಚರ್ಚೆಗೆ ಸರ್ಕಾರದ ಉತ್ತರ.

4.ವಿತ್ತೀಯ ಕಾರ್ಯಕಲಾಪಗಳು

"2015-16ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲೆ ಸಾಮಾನ್ಯ ಚರ್ಚೆ".

ಮು.ತಿ.ನೋ.,

೫. ಗಮನ ಸೆಳೆಯುವ ಸೂಚನೆಗಳು

1. ಶ್ರೀ ವಿ.ಸುನೀಲ್‌ಕುಮಾರ್ ಅವರು ಕಳೆದ ಡಿಸೆಂಬರ್ ತಿಂಗಳಿನಿಂದ ಯಾವುದೇ ಗ್ರಾಮ ಪಂಚಾಯತ್‌ಗಳಲ್ಲಿ ಕಟ್ಟಡ ನಿರ್ಮಾಣ ಪರವಾನಗಿ ನೀಡದೆ ಜನಸಾಮಾನ್ಯರಿಗೆ ಗ್ರಾಮಪಂಚಾಯತ್‌ನಿಂದ ನಿರಾಕ್ಷೇಪಣಾ ಪತ್ರ ಪಡೆಯುವಲ್ಲಿ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಗಮನ ಸೆಳೆಯುವುದು.

2. ಶ್ರೀ ಶಿವಾನಂದ ಎಸ್. ಪಾಟೀಲ್ ಅವರು ರಾಜ್ಯದ ಬಹುತೇಕ ಜಿಲ್ಲೆಗಳಲ್ಲಿ ಅಕಾಲಿಕ ಮಳೆಯಿಂದಾಗಿ ವಿಜಯಪುರ ಜಿಲ್ಲೆಯಲ್ಲಿ ೨೦೦ಕೋಟಿಗೂ ಅಧಿಕ ಮೌಲ್ಯದ ದ್ರಾಕ್ಷಿ ಬೆಳೆ ನಾಶವಾಗಿರುವುದರಿಂದ, ದ್ರಾಕ್ಷಿ ಬೆಳೆಗಾರರಿಗೆ ಪರಿಹಾರ ನೀಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

3. ಶ್ರೀ ಕೆ.ಜಿ. ಬೋಪಯ್ಯ ಅವರು ವಾಜಪೇಯಿ ಆರೋಗ್ಯಶ್ರೀ ಯೋಜನೆಯಡಿ ಬಿ.ಪಿ.ಎಲ್ ಕಾರ್ಡುದಾರರಿಗೆ ಚಿಕಿತ್ಸೆ ನೀಡಲು ಗುರುತಿಸಿರುವ ಖಾಸಗಿ ಆಸ್ಪತ್ರೆಗಳಲ್ಲಿ ರೋಗಿಗಳಿಗೆ ಚಿಕಿತ್ಸೆ ನೀಡಲು ನಿರಾಕರಿಸುತ್ತಿರುವವರ ಮೇಲೆ ಸೂಕ್ತ ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

4. ಶ್ರೀ ಬಿ.ಎನ್.ವಿಜಯಕುಮಾರ್ ಅವರು ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಯ ಇನ್‌ಸ್ಟಿಟ್ಯೂಟ್ ಆಫ್ ನೆಫ್ರೋ-ಯುರಾಲಜಿ ಸಂಸ್ಥೆಯು ಹೊಸದಾಗಿ ಡಯಾಲಿಸಿಸ್ ಯಂತ್ರಗಳನ್ನು ಖರೀದಿಸಿರುವುದರಿಂದ, ಹಳೆಯ ಯಂತ್ರಗಳನ್ನು ಜಿಲ್ಲಾ ಆಸ್ಪತ್ರೆಗಳಿಗೆ ಹಸ್ತಾಂತರಿಸುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

5. ಶ್ರೀ ಯು.ಬಿ. ಬಣಕಾರ್ ಅವರು ದಿನಾಂಕ: ೦೧.೦೬.೧೯೮೭ರಿಂದ ೦೧.೦೭.೧೯೯೫ರ ವರೆಗಿನ ಅವಧಿಯಲ್ಲಿ ಪ್ರಾರಂಭವಾದ, ಸಾಮಾನ್ಯ ಆಡಳಿತ ಮಂಡಳಿಯವರು ಸತತ ೨೭ವರ್ಷಗಳಿಂದ ನಡೆಸುತ್ತಿರುವ ಪದವಿ ಮಹಾವಿದ್ಯಾಲಯಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

ಪಿ.ಓಂಪ್ರಕಾಶ
ಕಾರ್ಯದರ್ಶಿ

Raj N

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(http://kla.kar.nic.in/assembly/lob/lob.htm)